## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ. ಎಸ್.ಆರ್.ಪಂಚಾಕ್ಷರಯ್ಯ ಸಹಾಯಕ ಕೃಷಿ ನಿರ್ದೇಶಕರು (ಕೇಂದ್ರ) ಜಂಟಿ ಕೃಷಿ ನಿರ್ದೇಶಕರ ಕಛೇರಿ ದಾವಣಗೆರೆ ಇವರಿಗೆ ಸ್ವ - ಇಚ್ಛಾ ನಿವೃತ್ತಿ ಹೊಂದಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: 1)ಕೃಷಿ ಆಯುಕ್ತರ ಪತ್ರ ಸಂ: ಕೃಸಿಪ-(1)/ವಿವ-15/ 2011-12, ದಿನಾಂಕ: 13-06-2011

---

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, ಶ್ರೀ. ಎಸ್.ಆರ್.ಪಂಚಾಕ್ಷರಯ್ಯ ಸಹಾಯಕ ಕೃಷಿ ನಿರ್ದೇಶಕರು (ಕೇಂದ್ರ) ಜಂಟಿ ಕೃಷಿ ನಿರ್ದೇಶಕರ ಕಛೇರಿ, ದಾವಣಗೆರೆ, ಇವರು ತಮ್ಮ ಅನಾರೋಗ್ಯದ ಕಾರಣಗಳಿಂದಾಗಿ ಸ್ವಯಂ ನಿವೃತ್ತಿ ಹೊಂದಲು ಅನುಮತಿ ಕೋರಿ ಸಲ್ಲಿಸಿರುವ ದಿನಾಂಕ:26-03-2011ರ ಮನವಿಯೊಂದಿಗೆ ಸದರಿ ಅಧಿಕಾರಿಯ ವಿರುದ್ಧ ಯಾವುದೇ ಇಲಾಖಾ ವಿಚಾರಣೆಗಳು ಬಾಕಿ ಇರುವುದಿಲ್ಲವಾದ್ದರಿಂದ ಮತ್ತು ಸರ್ಕಾರದ ಬಾಕಿ ಏನಾದರೂ ಉದ್ಭವಿಸಿದಲ್ಲಿ ಕಟ್ಟುವ ಷರತ್ತಿಗೊಳಪಟ್ಟು, ದಿನಾಂಕ: 30-06-2011 ರಿಂದ ಅನ್ವಯಿಸುವಂತೆ ಸ್ವ-ಇಚ್ಛಾ ನಿವೃತ್ತಿಗೆ ಅನುಮತಿ ನೀಡಿ ಆದೇಶ ಹೊರಡಿಸುವಂತೆ ಕೋರಿದ್ದಾರೆ. ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತೋಇ 130 ಕೃಪಸೇ 2011 ಬೆಂಗಳೂರು, ದಿನಾಂಕ: 29-08-2011**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ. ಎಸ್.ಆರ್.ಪಂಚಾಕ್ಷರಯ್ಯ ಸಹಾಯಕ ಕೃಷಿ ನಿರ್ದೇಶಕರು (ಕೇಂದ್ರ) ಜಂಟಿ ಕೃಷಿ ನಿರ್ದೇಶಕರ ಕಛೇರಿ ದಾವಣಗೆರೆ ಅವರಿಂದ ಸರ್ಕಾರಕ್ಕೆ ಬರಬೇಕಾದ ಬಾಕಿ ಏನಾದರೂ ಇದ್ದರೆ, ಅದನ್ನು ಅವರಿಗೆ ನೀಡಬೇಕಾದ ನಿವೃತ್ತಿ ಉಪಲಬ್ದಗಳಿಂದ ವಸೂಲಿ ಮಾಡುವ ಷರತ್ತಿಗೊಳಪಟ್ಟು, ದಿನಾಂಕ:31-08-2011ರ ಅಪರಾಹ್ನದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ1958ರ ನಿಯಮ 285(1)(ಎ) ಅನ್ವಯ ಅವರಿಗೆ ಸ್ವ- ಇಚ್ಛಾ ನಿವೃತ್ತಿ ಹೊಂದಲು ಅನುಮತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

29/08/11

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.

**ಪ್ರತಿ:**

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು,
2) ಆಯುಕ್ತರು, ಕೃಷಿ ಇಲಾಖೆ ಬೆಂಗಳೂರು,
3) ಸಂಬಂಧಪಟ್ಟ ಅಧಿಕಾರಿಗಳು, (ಕೃಷಿ ಅಯುಕ್ತರ ಮೂಲಕ)
4) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.